**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಗೋವಿಂದರಾಜುರವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲ ಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಹೇಳಿಕೆ.**

**ಸೂಚನೆ:-** ಮಕ್ಕಳ ಮೇಲೆ ನಡೆಯುವ ದೌರ್ಜನ್ಯ, ಶೋಷಣೆ, ಅನುಚಿತ ವರ್ತನೆಯಿಂದ ಮಕ್ಕಳನ್ನು ರಕ್ಷಿಸಿ, ಪೋಷಣೆ ಒದಗಿಸಲು ಇರುವ ಮಕ್ಕಳ ಕಲ್ಯಾಣ ಸಮಿತಿ(ಸಿಡಬ್ಲ್ಯೂಸಿ) ರಚನೆಗೆ ಮೂರು ವರ್ಷದಿಂದ ಗ್ರಹಣ ಹಿಡಿದಿದೆ. ರಾಜ್ಯದಲ್ಲಿ ಪ್ರತಿ ಮೂರು ವರ್ಷಕ್ಕೊಮ್ಮೆ ಮಕ್ಕಳ ಕಲ್ಯಾಣ ಸಮಿತಿಗಳನ್ನು ಪುನಾರಚಿಸಬೇಕು. ಆದರೆ 2020 ನೇ ಅಕ್ಟೋಬರ್ ಬಳಿಕ ಸಮಿತಿಗಳನ್ನು ರಚಿಸುವ ಪ್ರಯತ್ನ ಕೇವಲ ಅರ್ಜಿಗಳನ್ನು ಸ್ವೀಕರಿಸುವ ಹಂತದಲ್ಲಿದೆ. ಅಧಿಕಾರಿಗಳಿಗೆ ಮಕ್ಕಳ ಕಲ್ಯಾಣ ಸಮಿತಿಗಳನ್ನು ರಚಿಸುವ ಆಸಕ್ತಿಯೇ ಇಲ್ಲ, ಮಕ್ಕಳು ದೌರ್ಜನ್ಯ, ಶೋಷಣೆಯಿಂದ ಬಳಲುವುದು ಅಧಿಕಾರಿಗಳಿಗೆ ಗಂಭೀರ ಸಮಸ್ಯೆಯೇ ಅಲ್ಲ, ಅವರಿಗೆ ಸಮಿತಿಗಳೇ ಬೇಕಾಗಿಲ್ಲ ಎಂಬ ಮನೋಭಾವ ಪ್ರದರ್ಶಿಸುತ್ತಿದ್ದಾರೆ. ಈ ವಿಷಯವು ಮಕ್ಕಳ ಹಿತದೃಷ್ಟಿಯಿಂದ ಮಹತ್ವದಾಗಿರುತ್ತದೆ.

**ಉತ್ತರ:**

ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015 ತಿದ್ದುಪಡಿ ಕಾಯ್ದೆ 2021 ಮತ್ತು ಮಾದರಿ ನಿಯಮಗಳು 2016 ತಿದ್ದುಪಡಿ ನಿಯಮಗಳು 2022 ರನ್ವಯ ಜಿಲ್ಲೆಗಳಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಗಳನ್ನು ರಚಿಸಲಾಗುತ್ತಿದೆ. ಸದರಿ ಸಮಿತಿ/ಮಂಡಳಿಗಳಿಗೆ ಅಧ್ಯಕ್ಷರು/ಸದಸ್ಯರನ್ನು 03 ವರ್ಷಕ್ಕೊಮ್ಮೆ ಹೊಸದಾಗಿ ನೇಮಿಸಲಾಗುತ್ತಿದೆ. ಆದರೆ, ಈ ಕೆಳಕಂಡ ಕಾರಣಾಂತರಗಳಿಂದ ಹೊಸ ಸಮಿತಿ/ಮಂಡಳಿಗಳಿಗೆ ಅಧ್ಯಕ್ಷರು/ಸದಸ್ಯರುಗಳ ಆಯ್ಕೆ ಪ್ರಕ್ರಿಯೆಯು ವಿಳಂಬಗೊಂಡಿರುತ್ತದೆ.

1. ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ 2017-18ನೇ ಸಾಲಿನಲ್ಲಿ ಮಕ್ಕಳ ಕಲ್ಯಾಣ ಸಮಿತಿಗಳನ್ನು ರಚಿಸಿ ಆದೇಶ ಹೊರಡಿಸಲಾಗಿದ್ದು, ಸದರಿ ಸಮಿತಿಯ ಕಾರ್ಯಾವಧಿಯು 2020-21ನೇ ಸಾಲಿಗೆ ಮುಕ್ತಾಯಗೊಂಡಿರುತ್ತದೆ. ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಮೂಲಕ ಹೊಸದಾಗಿ ಅಧ್ಯಕ್ಷರು/ಸದಸ್ಯರುಗಳನ್ನು ನೇಮಿಸಬೇಕಾಗಿರುತ್ತದೆ.

2. ಸರ್ಕಾರದ ಅಧಿಸೂಚನೆ ಸಂಖ್ಯೆ: ಮಮಇ 91 ಮಭಾಬ 2020, ದಿನಾಂಕ:06-08-2020ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಕೆ.ಎನ್. ಫಣೀಂದ್ರ ಇವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಆಯ್ಕೆ ಸಮಿತಿಯನ್ನು ರಚಿಸಲಾಗಿರುತ್ತದೆ.

3. ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಇಬ್ಬರು ಸದಸ್ಯರ ಅರ್ಹತೆಯನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 14848/2020ರಲ್ಲಿ ಪ್ರಕರಣ ದಾಖಲಿಸಲಾಗಿರುತ್ತದೆ.

4. ಮಾನ್ಯ ಉಚ್ಚ ನ್ಯಾಯಾಲಯದ ಆದೇಶ ದಿನಾಂಕ:03-09-2021ರಲ್ಲಿ ಇಬ್ಬರು ಸದಸ್ಯರುಗಳ ಸದಸ್ಯತ್ವವನ್ನು ರದ್ದುಗೊಳಿಸಿ ಅರ್ಹ ಸದಸ್ಯರುಗಳನ್ನೊಳಗೊಂಡ ಸಮಿತಿಯನ್ನು ಪುನರ್‌ರಚಿಸಲು ಆದೇಶಿಸಲಾಗಿರುತ್ತದೆ.

5. ದಿನಾಂಕ:28-01-2021 ರಂದು ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಕೆ.ಎನ್. ಫಣೀಂದ್ರ ಇವರು ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಅಧ್ಯಕ್ಷತೆಗೆ ರಾಜೀನಾಮೆ ನೀಡಿರುತ್ತಾರೆ.

6. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಮಮಇ 91 ಮಭಾಬ 2020, ದಿನಾಂಕ:30-10-2021ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಅಶೋಕ್ .ಬಿ. ಹಂಚಿಗೇರಿ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.

7. ರಾಜ್ಯದ ಎಲ್ಲಾ ಜಿಲ್ಲೆಗಳ ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಗಳಿಗೆ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತುರಕ್ಷಣೆ) ಕಾಯ್ದೆ 2015 ಮತ್ತು ಮಾದರಿ ನಿಯಮಗಳು 201 ರನ್ವಯ ಸ್ವೀಕೃತವಾದ ಅರ್ಜಿಗಳಲ್ಲಿ ಅರ್ಹ ಅಭ್ಯರ್ಥಿಗಳ ಸಂದರ್ಶನವನ್ನು ಹಮ್ಮಿಕೊಳ್ಳಲು ದಿನಾಂಕವನ್ನು ನಿಗದಿಪಡಿಸಲಾಗಿರುತ್ತದೆ. ಆದರೆ, ಕೋವಿಡ್ ಕಾರಣದಿಂದಾಗಿ ಆಯ್ಕೆ ಪ್ರಕ್ರಿಯೆಯನ್ನು ಮುಂದೂಡಲಾಗಿರುತ್ತದೆ.

8. ದಿನಾಂಕ:28-02-2022 ರಂದು ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಅಶೋಕ್.ಬಿ. ಹಂಚಿಗೇರಿ ಇವರು ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಅಧ್ಯಕ್ಷತೆಗೆ ರಾಜೀನಾಮೆ ನೀಡಿರುತ್ತಾರೆ.

9. ಸರ್ಕಾರದ ಅಧಿಸೂಚನೆ ಸಂಖ್ಯೆ:ಮಮಇ 91 ಮಭಾಬ 2020, ದಿನಾಂಕ:29-04-2022 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಹೆಚ್.ಜಿ. ರಮೇಶ್ ಇವರನ್ನು ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಲಾಗಿರುತ್ತದೆ.

10. 2021-22ನೇ ಸಾಲಿನಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತುರಕ್ಷಣೆ) ಕಾಯ್ದೆ 2015 ಮತ್ತು ಮಾದರಿ ನಿಯಮಗಳು 2016ಕ್ಕೆ ಕೇಂದ್ರ ಸರ್ಕಾರದಿಂದ ತಿದ್ದುಪಡಿಗೊಳಿಸಲಾಗಿರುತ್ತದೆ.

11. ಸದರಿ ತಿದ್ದುಪಡಿ ಕಾಯ್ದೆ ಮತ್ತು ನಿಯಮಗಳನ್ವಯ ಅರ್ಹ ಅಭ್ಯರ್ಥಿಗಳಿಂದ ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಗಳಿಗೆ ಹೊಸದಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

12. ದಿನಾಂಕ:10-08-2022 ರಂದು ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಹೆಚ್.ಜಿ. ರಮೇಶ್ ಇವರು ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಅಧ್ಯಕ್ಷರ ಸ್ಥಾನಕ್ಕೆ ರಾಜೀನಾಮೆಯನ್ನು ನೀಡಿರುತ್ತಾರೆ.

13. ಸರ್ಕಾರದ ಅಧಿಸೂಚನೆ ಸಂಖ್ಯೆ: ಮಮಇ 91 ಮಭಾಬ 2020, ದಿನಾಂಕ:21-08-2023ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಪಿ. ಕೃಷ್ಣಭಟ್ ಇವರನ್ನು ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಲಾಗಿರುತ್ತದೆ.

14. ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಪರಿಷ್ಕೃತ ಕಾಯ್ದೆ ಮತ್ತು ನಿಯಮಗಳನ್ವಯ ಪರಿಶೀಲಿಸಿ, ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿರುತ್ತದೆ.

15. ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಅಧ್ಯಕ್ಷರಾದ ಶ್ರೀ ಪಿ. ಕೃಷ್ಣಭಟ್ ಇವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್-2023ರ ಮಾಹೆಯಿಂದ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು, ನವೆಂಬರ್-2023ರ ಅಂತ್ಯದವರೆಗೂ 17 ಜಿಲ್ಲೆಗಳ ಸಂದರ್ಶನ ಪ್ರಕ್ರಿಯೆ ಪೂರ್ಣಗೊಂಡಿರುತ್ತದೆ. ಉಳಿದ 14 ಜಿಲ್ಲೆಗಳ ಸಂದರ್ಶನ ಪ್ರಕ್ರಿಯೆಯನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಗಳಿಗೆ ಹೊಸದಾಗಿ ಅಧ್ಯಕ್ಷರು/ ಸದಸ್ಯರನ್ನು ನೇಮಿಸಿ ಆದೇಶ ಹೊರಡಿಸಲು ಕ್ರಮವಹಿಸಲಾಗುವುದು.

ಮಮಇ 125 ಮಭಾಬ 2023.

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.